ಮೈಸೂರು: ಇತ್ತೀಚಿನ ದಿನಗಳಲ್ಲಿ ದೂರದರ್ಶನ, ಸಿನಿಮಾ ಮತ್ತು ಮೊಬೈಲ್‌ಗಳ ಹಾವಳಿಯಿಂದಾಗಿ ಯುವ ಸಮುದಾಯ ಕ್ರೀಡಾ ಚಟುವಟಿಕೆಗಳಿಂದ ವಿಮುಖವಾಗುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದು ಪ್ರಾಂಶುಪಾಲ ಡಾ.ಅಣ್ಣೇಗೌಡ ಅಭಿಪ್ರಾಯಪಟ್ಟರು.



ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗದಿಂದ ಮೈಸೂರು ವಿವಿ ಓವೆಲ್ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದ್ದ 2016–17ನೇ ಸಾಲಿನ ''ಕಾಲೇಜು ವಾರ್ಷಿಕ ಕ್ರೀಡಾಕೂಟ' ಉದ್ಘಾಟನಾ ಸಮಾರಂಭದ ಅಧ್ಯಕ್ಷತೆವಹಿಸಿ ಮಾತನಾಡಿದರು.

ಸ್ಪರ್ಧಾ ಮನೋಭಾವ, ಸೌಹಾರ್ಧತೆ ಮತ್ತು ಆರೋಗ್ಯ ಸುಧಾರಣೆಯಲ್ಲಿ ಕ್ರೀಡಾ ಚಟುವಟಿಕೆಗಳು ಮಹತ್ವದ ಪಾತ್ರ ವಹಿಸಲಿವೆ. ಆದ್ದರಿಂದ ಕಾಲೇಜಿನ ವಿದ್ಯಾರ್ಥಿನಿಯರು ಈ ಕ್ರೀಡಾಕೂಟದ ಎಲ್ಲ ಸ್ಪರ್ಧೆಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು ಎಂದು ಸಲಹೆ ನೀಡಿದರು.

ವಿಶ್ವಮಾನವ ಮೈಸೂರು ವಿವಿ ನೌಕರರ ವೇದಿಕೆ ಅಧ್ಯಕ್ಷ ಆರ್.ವಾಸುದೇವ್ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿ, ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಕ್ರೀಡಾ ಚಟುವಟಿಕೆಗಳು ಸಹಕಾರಿಯಾಗಲಿವೆ. ಕ್ರೀಡಾಪಟುಗಳಿಗೆ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳಲು ಈ ರೀತಿಯ ಸ್ಪರ್ಧೆಗಳು ವೇದಿಕೆ ಕಲ್ಪಿಸಿಕೊಡಲಿವೆ. ಆದ್ದರಿಂದ ವಿದ್ಯಾರ್ಥಿನಿಯರು ಈ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಯುವರಾಜ ಕಾಲೇಜು ದೈಹಿಕ ಶಿಕ್ಷಣ ನಿರ್ದೇಶಕ ಹಾಗೂ ಮೈಸೂರು ವಿವಿ ಚಾಮುಂಡಿ ವಲಯದ ಸಂಚಾಲಕ ಡಾ.ಕೃಷ್ಣಕುಮಾರ್ ಮಾತನಾಡಿ, ಎಲ್ಲ ವಿದ್ಯಾರ್ಥಿಗಳಿಗೂ ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಿಕೊಡುವ ಉದ್ದೇಶದಿಂದ ಈ ಸ್ಪರ್ಧೆಗಳನ್ನು ಪ್ರತಿ ವರ್ಷ ಆಯೋಜಿಸಲಾಗುತ್ತದೆ. ಇದನ್ನು ಎಲ್ಲರೂ ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಸಮಾರಂಭದಲ್ಲಿ ವಾಣಿಜ್ಯ ವಿಭಾಗದ ಮುಖ್ಯಸ್ಥ ಪ್ರೊ.ಎಂ.ಶಿವಣ್ಣ, ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ಎಂ.ಎಸ್.ನಾಗಣ್ಣ, ಸಾಂಸ್ಕೃತಿಕ ವೇದಿಕೆ ಸಂಚಾಲಕ ಪ್ರೊ.ಪಿ.ಶಿವಣ್ಣ ಹಾಜರಿದ್ದರು. ಡಾ.ಶಿವಕುಮಾರ್ ನಿರೂಪಿಸಿದರು. ಬಳಿಕ ಕಾಲೇಜಿನ ವಿದ್ಯಾರ್ಥಿನಿಯರಿಗೆ ವಿವಿಧ ಅಥ್ಲೆಟಿಕ್ ಸ್ಪರ್ಧೆಗಳನ್ನು ನಡೆಸಲಾಯಿತು.